ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಸಿ5[4]ಶಿಕ್ಷಣ ಅದಾಲತ್:17:2013-14 ದಿನಾಂಕ:20ನೇ ಫೆಬ್ರವರಿ 2015

## : ಜ್ಞಾ ಪ ನ :

**ವಿಷಯ**: 2013-14ನೇ ಸಾಲಿನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಏರ್ಪಡಿಸುವ ಬಗ್ಗೆ.

**ಉಲ್ಲೇಖ**: ಈ ಕಛೇರಿ ಜ್ಞಾಪನಾ ಸಂಖ್ಯೆ ಸಿ5(4) ಶಿಕ್ಷಣ ಅದಾಲತ್ 17/2013-14 ದಿನಾಂಕ 19-09-2013

---

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ 2013-14ನೇ ಸಾಲಿನಲ್ಲಿಯೂ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಬೆಂಗಳೂರು ಆಯುಕ್ತಾಲಯದ ವ್ಯಾಪ್ತಿಗೆ ಬರುವ ಎಲ್ಲಾ ಶೈಕ್ಷಣಿಕ ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲಾಗಿತ್ತು. ಕಾರಣಾಂತರಗಳಿಂದ ಕೆಲವು ಜಿಲ್ಲೆಗಳಲ್ಲಿ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಮುಂದೂಡಲಾಗಿದ್ದು, ಈ ರೀತಿ ಮುಂದೂಡಲಾದ ಜಿಲ್ಲೆಗಳಲ್ಲಿ ಶಿಕ್ಷಣ ಅದಾಲತ್ ದಿನಾಂಕವನ್ನು ಕೆಳಕಂಡಂತೆ ನಿಗಧಿಪಡಿಸಲಾಗಿದೆ. ಆಯಾ ಜಿಲ್ಲಾ ಉಪನಿರ್ದೇಶಕರು ತಮ್ಮ ಕಛೇರಿ ಸೇರಿದಂತೆ ಜಿಲ್ಲೆಯ ವ್ಯಾಪ್ತಿಗೆ ಬರುವಂತಹ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಬಾಕಿ ಇರುವ ಕಡತಗಳನ್ನು ನಿಯಮಾನುಸಾರ ಪರಿಶೀಲಿಸಿ, ತ್ವರಿತವಾಗಿ ಇತ್ಯರ್ಥಪಡಿಸಲು ಕ್ರಮತೆಗೆದುಕೊಳ್ಳಲು ತಿಳಿಸಿದೆ. ಈ ಶಿಕ್ಷಣ ಅದಾಲತ್‌ನಲ್ಲಿ ಆಯುಕ್ತರು ಖುದ್ದಾಗಿ ಹಾಜರಿದ್ದು, ಕಡತಗಳನ್ನು ವಿಲೇವಾರಿ ಮಾಡುವುದಲ್ಲದೇ, ಸಾರ್ವಜನಿಕರಿಂದ ಬರುವಂತಹ ಅಹವಾಲುಗಳ ಬಗ್ಗೆ ಸ್ಥಳದಲ್ಲಿಯೇ ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ..

| ಕ್ರ. ಸಂ. | ಜಿಲ್ಲೆಯ ಹೆಸರು | ಶಿಕ್ಷಣ ಅದಾಲತ್ ದಿನಾಂಕ | ನೋಡಲ್ ಅಧಿಕಾರಿಯ ಹೆಸರು |
|---|---|---|---|
| 01. | ರಾಮನಗರ | 03-03-2015 | ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು. |
| 02. | ಶಿವಮೊಗ್ಗ | 04-03-2015 | ನಿರ್ದೇಶಕರು-ಪರೀಕ್ಷೆಗಳು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಬೆಂಗಳೂರು |
| 03. | ಕೊಡಗು | 07-03-2015 | ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಪಠ್ಯಪುಸ್ತಕ ಸೊಸೈಟಿ ಸಾ.ಶಿ.ಇಲಾಖೆ, ಬೆಂಗಳೂರು. |
| 04. | ದಕ್ಷಿಣ ಕನ್ನಡ | 10-03-2015 | ನಿರ್ದೇಶಕರು, ಅಲ್ಪ ಸಂಖ್ಯಾತ ನಿರ್ದೇಶನಾಲಯ ಬೆಂಗಳೂರು. |
| 05. | ಉಡುಪಿ | 11-03-2015 | ಕಾರ್ಯದರ್ಶಿಗಳು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಬೆಂಗಳೂರು. |

ಈ ಹಿನ್ನೆಲೆಯಲ್ಲಿ ನಿಮ್ಮ ಕಛೇರಿಯ ಕಡತಗಳು ಈ ಕಛೇರಿಯಲ್ಲಿ ಬಾಕಿ ಇದ್ದಲ್ಲಿ ಅಂತಹ ಕಡತಗಳ ಬಗ್ಗೆ ತ:ಖ್ತೆಯನ್ನು ಶಾಖಾವಾರು ತಯಾರಿಸಿ, ಸಂಬಂಧಿಸಿದ ಓರ್ವ ಅಧೀಕ್ಷಕರ ಮುಖೇನ ದಿನಾಂಕ:28.02.2015ರೊಳಗಾಗಿ ಈ ಕಛೇರಿಗೆ ತಲುಪಿಸುವಂತೆ ತಿಳಿಸಿದೆ. ಯಾವುದೇ ಕಾರಣಕ್ಕೂ ಅನಗತ್ಯವಾಗಿ ಕಡತಗಳು ಬಾಕಿ ಇರದಂತೆ ಸೂಕ್ತ ಕ್ರಮವಹಿಸಲು ತಿಳಿಸಿದೆ. .

ಮೇಲೆ ಕೈಗೊಳ್ಳಲಾದ ಶಿಕ್ಷಣ ಅದಾಲತ್ ಕಾರ್ಯಕ್ರಮ ನಿಗದಿಪಡಿಸಿದ ದಿನಾಂಕಗಳಲ್ಲಿ ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 2.00 ಗಂಟೆಯವರೆಗೆ ಬಾಕಿ ಇರುವ ಕಡತಗಳನ್ನು ವಿಲೇವಾರಿಗಾಗಿ ಕ್ರಮ ಕೈಗೊಳ್ಳಲು ಸಮಯ ನಿಗದಿಪಡಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅಂದು ಸಾರ್ವಜನಿಕರಿಗೆ ಹಾಗೂ ಆಡಳಿತ ಮಂಡಳಿಯವರಿಗೆ ಆಯುಕ್ತರಿಗೆ ಅರ್ಜಿಗಳನ್ನು ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಆಯಾ ಜಿಲ್ಲೆಯಲ್ಲಿ ವ್ಯಾಪಕ ಪ್ರಚುರ ಪಡಿಸಲು ಕ್ರಮಕೈಗೊಳ್ಳಲು ತಿಳಿಸಿದೆ.

ಈ ಬಗ್ಗೆ ಕೈಗೊಂಡಿರುವ ಕ್ರಮದ ವರದಿಯನ್ನು ***ದಿ:28..02.2015ರೊಳಗಾಗಿ ಶ್ರೀ ಎನ್. ಚಂದ್ರಶೇಖರ್ ಜಂಟಿ ಆಯುಕ್ತರು[ಆಡಳಿತ] ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು,*** ಇವರಿಗೆ ಸಲ್ಲಿಸಲು ತಿಳಿಸಿದೆ.

[ಮೊಹಮ್ಮದ್ ಮೊಹಸಿನ್]
ಆಯುಕ್ತರು

**ಇವರಿಗೆ:**

01. ಜಂಟಿ ಆಯುಕ್ತರು[ಆಡಳಿತ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
02. ನಿರ್ದೇಶಕರು [ಪ್ರೌಢ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.

\\10.96.135.22\e\D\OB\452-2013 - for merge.doc

03. ನಿರ್ದೇಶಕರು [ಪ್ರಾಥಮಿಕ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
04. ನಿರ್ದೇಶಕರು, [ಇತರೆ ಪರೀಕ್ಷೆಗಳು], ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
05. ನಿರ್ದೇಶಕರು, ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು.
06. ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು.
07. ನಿರ್ದೇಶಕರು, ಆರ್.ಎಂ.ಎಸ್.ಎ, ಬೆಂಗಳೂರು.
08. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು.
09. ಕಾರ್ಯದರ್ಶಿಗಳು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
10. ಸಹನಿರ್ದೇಶಕರು [ಶಾಲಾ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
11. ಸಹನಿರ್ದೇಶಕರು, ಸಾ.ಶಿ.ಇಲಾಖೆ, ಬೆಂಗಳೂರು ವಿಭಾಗ, ಬೆಂಗಳೂರು.
12. ಸಹನಿರ್ದೇಶಕರು, ಸಾ.ಶಿ.ಇಲಾಖೆ, ಮೈಸೂರು ವಿಭಾಗ, ಮೈಸೂರು.
13. ರಾಮನಗರ, ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ ಮತ್ತು ಕೊಡಗು ಜಿಲ್ಲಾ ಉಪನಿರ್ದೇಶಕರುಗಳಿಗೆ. ಹಾಗೂ ಡಯಟ್ ಪ್ರಾಂಶುಪಾಲರುಗಳಿಗೆ.
14. ಆಪ್ತ ಕಾರ್ಯದರ್ಶಿಗಳು, ಆಯುಕ್ತರ ಆಪ್ತ ಶಾಖೆ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
15. ರಾಮನಗರ, ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ ಮತ್ತು ಕೊಡಗು ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
16. ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳು ಹಾಗೂ ಅಧೀಕ್ಷಕರುಗಳಿಗೆ.